ಆ) ಸದರಿ ಕೇಂದ್ರಗಳಿಗೆ ಹೆಚ್ಚುವರಿ ಕಟ್ಟಡ ನೀಡದೆ ಇರುವುದರಿಂದ ಪದವಿ ತರಗತಿಗಳಿಗೂ ಕಟ್ಟಡ ಕೊರತೆ ಇರುವುದು ಸರ್ಕಾರಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಸ್ನಾತಕೋತ್ತರ ಕೇಂದ್ರಕ್ಕೆ ಹೆಚ್ಚುವರಿ ಕಟ್ಟಡ ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು(ವಿವರ ನೀಡುವುದು)?

ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಬಂದಿದೆ.

ಇ) ಹಣಕಾಸಿನ ಲಭ್ಯತೆಯನ್ನಾಧರಿಸಿ ಮುಂದಿನ ಸಾಲುಗಳಲ್ಲಿ ಹಂತ ಹಂತವಾಗಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು.

ಮಂಡ್ಯ ಜಿಲ್ಲೆಯಲ್ಲಿ ಜೂನಿಯರ್ ಕಾಲೇಜು ಪ್ರಾರಂಭಿಸುವ ಬಗ್ಗೆ

277 (691) : ಶ್ರೀ ಚಂದ್ರಶೇಖರ್ ಕೆ.ಬಿ. (ಕೆ.ಆರ್.ಪೇಟೆ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆ, ಕೆ.ಆರ್.ಪೇಟೆ ತಾಲ್ಲೂಕು, ಬೂದನಕೆರೆ ಹೋಬಳಿ, ಗಂಜಿಗೆರೆಯಲ್ಲಿ ಜ್ಯೂನಿಯರ್ ಕಾಲೇಜು ಪ್ರಾರಂಭಿಸುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಜ್ಯೂನಿಯರ್ ಕಾಲೇಜು ಪ್ರಾರಂಭಿಸಲು ಸರ್ಕಾರ ತೀರ್ಮಾನ ಕೈಗೊಂಡಿದೆಯೇ;

ಇ) ಈ ಗ್ರಾಮದಲ್ಲಿ ಹೆಚ್ಚು ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದು, ವಿದ್ಯಾರ್ಥಿಗಳು ಕಾಲೇಜು ವಿದ್ಯಾಭ್ಯಾಸಕ್ಕೆ ಪಟ್ಟಣವನ್ನೇ ಅವಲಂಬಿಸಿರುವುದರಿಂದ ಸರ್ಕಾರ ಜ್ಯೂನಿಯರ್ ಕಾಲೇಜು ಪ್ರಾರಂಭಿಸಲು ತೆಗೆದುಕೊಂಡಿರುವ ಕ್ರಮದ ಬಗ್ಗೆ ಮಾಹಿತಿಯನ್ನು ಒದಗಿಸುವುದು;

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) ಕೆ.ಆರ್.ಪೇಟೆ ತಾಲ್ಲೂಕು, ಗಂಜಿಗೆರೆಯಲ್ಲಿ ಸಂಯುಕ್ತ ಪದವಿ ಪೂರ್ವ ಕಾಲೇಜು ಪ್ರಾರಂಭಿಸುವ ಬಗ್ಗೆ ಪ್ರಸ್ತಾವನೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಕೆ.ಆರ್.ಪೇಟೆ ತಾಲ್ಲೂಕು, ಗಂಜಿಗೆರೆಯಲ್ಲಿ ಸರ್ಕಾರಿ ಪ್ರೌಢಶಾಲೆ ಇದ್ದು, 60 ವಿದ್ಯಾರ್ಥಿಗಳು 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುತ್ತಾರೆ. ಗಂಜಿಗೆರೆಯಿಂದ ಸುಮಾರು 5 ಕಿ.ಮೀ. ಅಂತರದಲ್ಲಿ ಸೋಮನಹಳ್ಳಿಯಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ಇರುತ್ತದೆ. ಮತ್ತು 6 ಕಿ.ಮೀ. ಅಂತರದಲ್ಲಿ ಬಾಳೇನಹಳ್ಳಿ ಮತ್ತು ಇಷ್ಟೇ ಅಂತರದಲ್ಲಿ ಅಂದರೆ 6 ಕಿ.ಮೀ. ದೂರದ ಬೂಕನಕೆರೆ ಗ್ರಾಮಗಳಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಇರುತ್ತವೆ.

ರಾಜ್ಯದಲ್ಲಿ ಪಶುಸಂಗೋಪನಾ ಇಲಾಖೆಯ ಜಾನುವಾರುಗಳಿಗೆ ಕಡ್ಡಾಯ ವಿಮೆ ಮಾಡಿಸುವ ಬಗ್ಗೆ

278 (281) ಶ್ರೀ. ದಿನಕರ ಕೇಶವ ಶೆಟ್ಟಿ (ಕುಮಟ) : ಮಾನ್ಯ ಪಶುಸಂಗೋಪನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪಶುಸಂಗೋಪನಾ ಇಲಾಖೆ ವತಿಯಂದ ಎಲ್ಲಾ ಜಾನುವಾರುಗಳಿಗೂ ಕಡ್ಡಾಯ ವಿಮೆ ಮಾಡಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಎಲ್ಲಾ ಜಾನುವಾರುಗಳಿಗೂ ಕಡ್ಡಾಯ ವಿಮೆ ಮಾಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಇ) ಎಲ್ಲಾ ಜಾನುವಾರುಗಳಿಗೂ ಸರ್ಕಾರವೆ ನೇರವಾಗಿ ಕಡ್ಡಾಯ ವಿಮೆ ಮಾಡಿಸಲು ಸರ್ಕಾರಕ್ಕಿರುವ ತೊಂದರೆಗಳೇನು?

ಈ) ಎಲ್ಲಾ ಜಾನುವಾರುಗಳಿಗೂ ಸರ್ಕಾರವೇ ವಿಮೆ ಮಾಡಿಸುವುದರಿಂದ ರೈತರಿಗೆ ಮತ್ತು ಬಡ ಕೂಲಿ ಕಾರ್ಮಿಕರಿಗೆ ಅನುಕೂಲವಾಗುವುದಿಲ್ಲವೇ?

ಶ್ರೀ ರೇವೂನಾಯಕ್ ಬೆಳಮಗಿ (ಪಶುಸಂಗೋಪನಾ ಸಚಿವರು) :

ಅ) ಬಂದಿದೆ.

ಆ) ಭಾರತ ಸರ್ಕಾರದ 11ನೇ ಪಂಚವಾರ್ಷಿಕ ಯೋಜನೆಯಡಿ ರಾಜ್ಯದ ಆಯ್ದ 14 ಜಿಲ್ಲೆಗಳಲ್ಲಿ ಜಾನುವಾರು ವಿಮೆ ಕಾರ್ಯಕ್ರಮವನ್ನು ಕರ್ನಾಟಕ ಜಾನುವಾರು ಅಭಿವೃದ್ಧಿ ಸಂಸ್ಥೆವತಿಯಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಈ ಕಾರ್ಯಕ್ರಮದಡಿ ಶೇ. 50 ರಷ್ಟು ವಿಮೆ ಹಣವನ್ನು